Sree Siddhartha College of Education
Ref. No. 655
Date 13/10/2023
TUMKUR

# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು–572 103

ಸಂಖ್ಯೆ :ತುವಿ: ಶಾ.ಅ.ಪ:ಸಂ:2023–24–೨೭೬೨ ದಿನಾಂಕ: 12.10.2023

## ಅಧಿಸೂಚನೆ

**ವಿಷಯ: 2023–24ನೇ ಶೈಕ್ಷಣಿಕ ಸಾಲಿಗೆ ಶ್ರೀ ಸಿದ್ಧಾರ್ಥ ಶಿಕ್ಷಣ ಮಹಾವಿದ್ಯಾಲಯದ ಸಂಯೋಜನೆಯನ್ನು ನವೀಕರಿಸುವ ಕುರಿತು.**

ಉಲ್ಲೇಖ: (1) ಪ್ರಾಂಶುಪಾಲರು ಶ್ರೀ ಸಿದ್ಧಾರ್ಥ ಶಿಕ್ಷಣ ಮಹಾವಿದ್ಯಾಲಯ, ತುಮಕೂರು ಇವರ ಪತ್ರ ಸಂಖ್ಯೆ:ಎಸ್ಎಸ್ಸಿಇ/80/2022–23 ದಿನಾಂಕ:23.05.2023

(2) ದಿನಾಂಕ:28.06.2023ರಂದು ನಡೆದ ವಿದ್ಯಾವಿಷಯಕ ಪರಿಷತ್ ನಿರ್ಣಯ.

(3) ದಿನಾಂಕ:28.06.2023ರಂದು ನಡೆದ ಸಿಂಡಿಕೇಟ್ ಸಭೆಯ ನಿರ್ಣಯ.

(4) SRC, NCTE, Bangalore ಇವರ ಆದೇಶ ಸಂಖ್ಯೆ:F.SRO/NCTE/ AOS0 0464/ B.Ed/ KA/2015/76138 ದಿನಾಂಕ 14.10.2015

(5) ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:12.10.2023

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ಪತ್ರದಲ್ಲಿ ಪ್ರಾಂಶುಪಾಲರು **ಶ್ರೀ ಸಿದ್ಧಾರ್ಥ ಶಿಕ್ಷಣ ಮಹಾವಿದ್ಯಾಲಯ, ತುಮಕೂರು** ಇವರು 2023–24ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ನವೀಕರಣ ಕೋರಿ ಅರ್ಜಿ ಸಲ್ಲಿಸಿದ್ದರು. ಈ ಸಂಬಂಧ ವಿಶ್ವವಿದ್ಯಾನಿಲಯದ ಸ್ಥಳೀಯ ವಿಚಾರಣಾ ಸಮಿತಿಯು ಸದರಿ ಕಾಲೇಜಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಬಿ.ಇಡಿ ಕೋರ್ಸಿನ 50 (ಐವತ್ತು) ವಿದ್ಯಾರ್ಥಿಗಳ ಪ್ರವೇಶಮಿತಿಯ ಸಂಯೋಜನೆ ನವೀಕರಣಕ್ಕೆ ಶಿಫಾರಸ್ಸು ಮಾಡಿ ವರದಿ ಸಲ್ಲಿಸಿರುತ್ತದೆ. ಸದರಿ ವರದಿಯನ್ನು ಉಲ್ಲೇಖ (2) ಮತ್ತು (3)ರ ಸಭೆಗಳಲ್ಲಿ ಮಂಡಿಸಿದ್ದು, ಸಭೆಗಳು ವರದಿಯನ್ನು ಅನುಮೋದಿಸಿರುತ್ತದೆ.

ಉಲ್ಲೇಖ (4) ರ SRC, NCTE, Bangalore ಇವರ ಆದೇಶದಲ್ಲಿ ಸದರಿ ಕಾಲೇಜಿಗೆ 2015–16ನೇ ಶೈಕ್ಷಣಿಕ ಸಾಲಿನಿಂದ ಎರಡು ವರ್ಷದ ಬಿ.ಇಡಿ ಕೋರ್ಸಿಗೆ ವಾರ್ಷಿಕ 50 (ಐವತ್ತು) ವಿದ್ಯಾರ್ಥಿಗಳ ಪ್ರವೇಶ ಮಿತಿಯಂತೆ ಒಂದು ಘಟಕಕ್ಕೆ ಮಾನ್ಯತೆ ನೀಡಿರುತ್ತದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ–2000 ರ 59ನೇ ಪ್ರಕರಣದ (17) ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಈ ವಿಶ್ವವಿದ್ಯಾನಿಲಯವು 2023–24ನೇ ಶೈಕ್ಷಣಿಕ ಸಾಲಿಗೆ ಶ್ರೀ ಸಿದ್ಧಾರ್ಥ ಶಿಕ್ಷಣ ಮಹಾವಿದ್ಯಾಲಯ, ತುಮಕೂರು ಇಲ್ಲಿ ನಡೆಸುತ್ತಿರುವ ಬಿ.ಇಡಿ. ಕೋರ್ಸಿಗೆ ಉಲ್ಲೇಖ (4) ರಲ್ಲಿನ NCTE ಆದೇಶದಲ್ಲಿ **ನಿಗದಿಪಡಿಸಿರುವ 50 (ಐವತ್ತು) ವಿದ್ಯಾರ್ಥಿಗಳ ಪ್ರವೇಶ ಪರಿಮಿತಿಯೊಂದಿಗೆ** ಈ ಕೆಳಕಂಡ ಷರತ್ತಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಿ ಮುಂದುವರೆಸಲು ಮಂಜೂರಾತಿ ನೀಡಲಾಗಿದೆ.

As per LIC Secured Weighted Score of the College is 73.98%

**ಷರತ್ತುಗಳು:**

1. **ಕಾಲೇಜಿಗೆ ಅವಶ್ಯಕವಾದ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು ಹಾಗೂ ಸ್ಥಳೀಯ ವಿಚಾರಣಾ ಸಮಿತಿಯು ವಿಧಿಸಿರುವ ಪ್ರತಿಯೊಂದು ಷರತ್ತುಗಳನ್ನು ತಪ್ಪದೇ ಕಡ್ಡಾಯವಾಗಿ ಪಾಲಿಸಿ ಅನುಪಾಲನಾ ವರದಿಯನ್ನು ಈ ಅಧಿಸೂಚನೆ ತಲುಪಿದ ಏಳು ದಿನಗಳೊಳಗಾಗಿ ವಿಶ್ವವಿದ್ಯಾನಿಲಯಕ್ಕೆ ತಪ್ಪದೇ ಸಲ್ಲಿಸತಕ್ಕದ್ದು (Observations) ಪ್ರತಿ ಲಗತ್ತಿಸಿದೆ).**
2. ಪ್ರಾಂಶುಪಾಲರ ಹಾಗೂ ಅಧ್ಯಾಪಕರುಗಳ ನೇಮಕಾತಿಯಲ್ಲಿ NCTE ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು.
3. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸ್‌ಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನ–ರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು.
4. ವಿಶ್ವವಿದ್ಯಾನಿಲಯದ ಪ್ರತಿನಿಧಿಯನ್ನೊಳಗೊಂಡಂತೆ ಗೌರ್ನಿಂಗ್ ಕೌನ್ಸಿಲ್ ಸಭೆಯನ್ನು ಕಡ್ಡಾಯವಾಗಿ ನಡೆಸುವುದು ಹಾಗೂ ಸಭೆಯ ನಡಾವಳಿಯನ್ನು ವಿಶ್ವವಿದ್ಯಾನಿಲಯಕ್ಕೆ ತಪ್ಪದೆ ಸಲ್ಲಿಸುವುದು.
5. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ.
6. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾನಿಲಯದ ಅನುಶಾಸನ,

7. ಕಾಲೇಜು / ಆಡಳಿತ ಮಂಡಳಿಯು ಶೇ.50% ರಷ್ಟು ವಿಶ್ವವಿದ್ಯಾನಿಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾನಿಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು ; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾನಿಲಯವು ನಿಗದಿಪಡಿಸಿರುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ಶುಲ್ಕ / ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
8. ಮೇಲ್ಕಂಡ ಕಾಲೇಜು ವಿಶ್ವವಿದ್ಯಾನಿಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು.
9. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
10. ದಿನಾಂಕ : 13.08.1997 ರಂದು ವಿಶಾಖ V/s ರಾಜಸ್ತಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ / ವಿದ್ಯಾರ್ಥಿಯು ಗಲಭೆಯನ್ನು ಉಂಟುಮಾಡುವುದಾಗಲಿ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡುವುದಾಗಲಿ ಮಾಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ / ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು, ಮತ್ತು ಆ ವ್ಯಕ್ತಿ / ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು / ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು.
11. ಕಾಲೇಜು ಅರ್ಹ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯನ್ನು ಸರ್ಕಾರದ ನಿಯಮಾವಳಿ ಮತ್ತು NCTE ನಿಯಮಾವಳಿ ಪ್ರಕಾರ ನೇಮಕ ಮಾಡಿಕೊಳ್ಳತಕ್ಕದ್ದು.
12. ಬೋಧಕ / ಬೋಧಕೇತರ ನೇಮಕಾತಿಯಲ್ಲಿ ಸರ್ಕಾರ ನಿಗದಿಪಡಿಸಿದ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
13. NCTE ಯ ಮತ್ತು UGC ಕಾನೂನು ಶಾಸನಗಳ ಪ್ರಕಾರ ಕಾಲೇಜು ಸಂಸ್ಥೆಯು ನಿಯಮಾವಳಿಗಳನ್ನು ಆಡಳಿತ ಮತ್ತು ಶೈಕ್ಷಣಿಕ ವಿಚಾರಗಳಲ್ಲಿ ಕಾಲಕಾಲಕ್ಕೆ ತಪ್ಪದೇ ಪಾಲಿಸತಕ್ಕದ್ದು. ಈ ನಿಯಮಗಳನ್ನು ಪಾಲಿಸದಿದ್ದಲ್ಲಿ ಸೆಕ್ಷನ್ 17(1) ರ ಅಧಿನಿಯಮದ ಪ್ರಕಾರ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.
14. NCTE ಯ ಕಾನೂನುಗಳ ಪ್ರಕಾರ ಸಂಸ್ಥೆಯು ತನ್ನ ಅಂತರ್ಜಾಲ ವೆಬ್‌ಸೈಟ್‌ನ್ನು ಹೊಂದಿರಲು ಸೂಚಿಸಲಾಗಿದೆ.
15. NCTE, ಸರ್ಕಾರ ಮತ್ತು ವಿಶ್ವವಿದ್ಯಾನಿಲಯ ಸಂಯೋಜನೆಯ ಅಧಿಸೂಚನೆಯನ್ನು ಹೊರಡಿಸಿದ ನಂತರ ವಿದ್ಯಾರ್ಥಿಗಳ ಸೇರ್ಪಡೆ ಮಾಡಿಕೊಳ್ಳತಕ್ಕದ್ದು.
16. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಕೋರ್ಸನ್ನು ಉತ್ತಮವಾಗಿ ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು / ಆಡಳಿತ ಮಂಡಳಿಯು ವಿದ್ಯಾರ್ಥಿ / ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.
17. ಕಾಲೇಜಿನ ಆಡಳಿತ ಮಂಡಳಿಯು ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾನಿಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ, ಮೀರಿ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ.
18. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ / ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು. ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.
19. ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲಿ ಪಡೆಯತಕ್ಕದ್ದಲ್ಲ.
20. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
21. ಸರ್ಕಾರ, NCTE ಹಾಗೂ ವಿಶ್ವವಿದ್ಯಾನಿಲಯವು ಕಾಲಕಾಲಕ್ಕೆ ಹೊರಡಿಸುವ ಅಧಿಸೂಚನೆ, ಆದೇಶಗಳು ಮತ್ತು ಸುತ್ತೋಲೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ಆದೇಶದ ಮೇರೆಗೆ

ಕುಲಸಚಿವರು 17/10/23

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

**ಪ್ರಾಂಶುಪಾಲರು, ಶ್ರೀ ಸಿದ್ಧಾರ್ಥ ಶಿಕ್ಷಣ ಮಹಾವಿದ್ಯಾಲಯ, ಕುಣಿಗಲ್ ರಸ್ತೆ, ಮರಳೂರು ತುಮಕೂರು.**

**ಪ್ರತಿಗಳು :**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಡಾ. ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು-560 001.
2. ಆಯುಕ್ತರು / ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-560 001.
3. ಕುಲಸಚಿವರು(ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಯವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಉಪಕುಲಸಚಿವರು (ಶೈಕ್ಷಣಿಕ ವಿಭಾಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.